# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1576

ಸದಸ್ಯರ ಹೆಸರು : ಡಾ: ಯತೀಂದ್ರ ಎಸ್ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 21.03.2025.

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ನಿರ್ಮಾಣಗೊಂಡಿರುವ ಅನಧಿಕೃತ ಬಡಾವಣೆಗಳಲ್ಲಿ ನಿರ್ಮಾಣಗೊಂಡಿರುವ ನಿವೇಶನ/ ಕಟ್ಟಡಗಳಿಗೆ ಒಂದು ಬಾರಿಗೆ ಅನ್ವಯವಾಗುವಂತೆ ಇ-ಸ್ವತ್ತು 11ಬಿ ನಮೂನೆಯನ್ನು ಸಾರ್ವಜನಿಕರಿಗೆ ವಿತರಿಸಲು ಸರ್ಕಾರವು ಕ್ರಮ ಕೈಗೊಂಡಿದೆಯೇ; | ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಮತ್ತು ಕರ್ನಾಟಕ ಪೌರಸಭೆಗಳ ಅಧಿನಿಯಮ, 1964 ಕ್ಕೆ ತಿದ್ದುಪಡಿ ತರಲಾಗಿದೆ. ಮುನ್ಸಿಪಲ್ ಕಾಯ್ದೆಗಳ ತಿದ್ದುಪಡಿಯಂತೆ ಕರ್ನಾಟಕ ಪೌರಸಭೆಗಳ (ತೆರಿಗೆ) ನಿಯಮಗಳು, 1965 ಮತ್ತು ಕರ್ನಾಟಕ ಪೌರನಿಗಮಗಳ ಅಧಿನಿಯಮ 1976 ಶೆಡ್ಯೂಲ್ 3 ರ ತೆರಿಗೆ ನಿಯಮಗಳಿಗೆ ತಿದ್ದುಪಡಿ ತರಲಾಗಿದೆ.<br><br>ಮೇಲಿನ ತಿದ್ದುಪಡಿಗಳಂತೆ ನಗರ ಸ್ಥಳೀಯ ಸಂಸ್ಥೆ ವ್ಯಾಪ್ತಿಯಲ್ಲಿನ ಅನಧಿಕೃತ ಸ್ವತ್ತುಗಳಿಗೆ ಇ-ಆಸ್ತಿ ತಂತ್ರಾಂಶದಲ್ಲಿ ಇ-ಖಾತಾ ಸೃಜನೆ ಮಾಡಲು ದಿನಾಂಕ: 11-02-2025 ರಿಂದ ಅವಕಾಶ ಕಲ್ಪಿಸಲಾಗಿದೆ. ಪ್ರಸ್ತುತ ಅನಧಿಕೃತ ಸ್ವತ್ತುಗಳನ್ನು ಆಸ್ತಿ ತೆರಿಗೆ ವ್ಯಾಪ್ತಿಗೆ ಒಳಪಡಿಸಿ, ಇ-ಖಾತಾ (ನಮೂನೆ 2 ಎ /3 ಎ ) ನೀಡಲು ಕ್ರಮ ವಹಿಸಲಾಗಿರುತ್ತದೆ |
| (ಆ) | ಹಾಗಿದ್ದಲ್ಲಿ, ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿಯೂ ಸಹ ಸರ್ವೇ ನಂಬರ್‌ನಲ್ಲಿ ಅನಧಿಕೃತ ಬಡಾವಣೆಯಲ್ಲಿ ನಿರ್ಮಾಣಗೊಂಡಿರುವ ನಿವೇಶನ/ ಕಟ್ಟಡಗಳಿಗೆ ಒಂದು ಬಾರಿಗೆ ಅನ್ವಯವಾಗುವಂತೆ ಇ-ಸ್ವತ್ತು 11ಬಿ ನಮೂನೆಯನ್ನು ಸಾರ್ವಜನಿಕರಿಗೆ ವಿತರಿಸಲು ಸರ್ಕಾರವು ಉದ್ದೇಶಿಸಿದೆಯೇ; | ಹೌದು. |
| (ಇ) | ಹಾಗಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು? (ಮಾಹಿತಿ ನೀಡುವುದು) | ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿನ ಕ್ರಮಬದ್ಧವಲ್ಲದ ನಿವೇಶನಗಳು ಮತ್ತು ಕಟ್ಟಡಗಳನ್ನು (ಸರ್ಕಾರಿ/ಸ್ಥಳೀಯ ಸಂಸ್ಥೆ/ಶಾಸನಬದ್ಧ ಸಂಸ್ಥೆ/ಅರಣ್ಯ ಭೂಮಿಯನ್ನು ಹೊರತುಪಡಿಸಿ) ತೆರಿಗೆ ವ್ಯಾಪ್ತಿಗೆ ಒಳಪಡಿಸಲು ಪ್ರತ್ಯೇಕ ವಹಿಯಲ್ಲಿ ದಾಖಲಿಸಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ಕ್ಕೆ ತಿದ್ದುಪಡಿ ತರಲಾಗುತ್ತಿದೆ. ಅಧಿನಿಯಮಕ್ಕೆ ತರಲಾಗುವ ತಿದ್ದುಪಡಿಯನ್ವಯ ಈ ಸಂಬಂಧ ನಿಯಮಗಳನ್ನು ರೂಪಿಸಿ ದಿನಾಂಕ:14.06.2013ಕ್ಕೂ ಮೊದಲು ಹಾಗೂ ನಂತರ ನೋಂದಣಿಯಾದ ಎಲ್ಲಾ ನಿವೇಶನಗಳು ಮತ್ತು ಕಟ್ಟಡಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ಖಾತೆ ನೀಡಲು ಕ್ರಮ ಕೈಗೊಳ್ಳಲಾಗುವುದು.<br><br>ಮುಂದುವರೆದು, ಮಾನ್ಯ ಮುಖ್ಯಮಂತ್ರಿಯವರು 2025-26ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 272 (1) ರಲ್ಲಿ ಎಲ್ಲಾ ಅಗತ್ಯ ದಾಖಲೆಗಳನ್ನು ಹೊಂದಿರುವ ಆಸ್ತಿಗಳಿಗೆ ಪ್ರಮಾಣ |

| | | |
|---|---|---|
| | | ಪತ್ರಗಳನ್ನು ವಿತರಿಸಲು "ಇ-ಸ್ವತ್ತು ಅಭಿಯಾನ" ಅನ್ನು ಆರಂಭಿಸಲಾಗುವುದೆಂದು ಘೋಷಿಸಿರುತ್ತಾರೆ. ಅದರಂತೆ ಇ-ಸ್ವತ್ತು ಅಭಿಯಾನ ಆರಂಭಿಸಿ ಇ- ಸ್ವತ್ತು ತಂತ್ರಾಂಶದ ಮೂಲಕ ಕ್ರಮಬದ್ಧ ಆಸ್ತಿಗಳಿಗೆ ನಮೂನೆ-9 ಮತ್ತು 11 ಎ ಹಾಗೂ ಕ್ರಮಬದ್ಧವಲ್ಲದ ಆಸ್ತಿಗಳಿಗೆ ನಮೂನೆ 11ಬಿ ವಿತರಿಸಲು ಕ್ರಮ ವಹಿಸಲಾಗುವುದು. |

ಸಂಖ್ಯೆ: ಗ್ರಾಅಪ 239 ಗ್ರಾಪಂಅ 2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.